ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

30

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:  ದಿನಾಂಕ : DATE : 23/3/2021

# ಮೀಸಲಾತಿ ಹೆಚ್ಚಳ?

## ಶೇ.50ರ ಮಿತಿ ಹೆಚ್ಚಳಕ್ಕೆ ಸುಪ್ರೀಂಗೆ ಅಫಿಡವಿಟ್

## ಮೀಸಲು ಮಿತಿ ರದ್ದತಿ ಕೋರಲು ರಾಜ್ಯ ಸಂಪುಟ ಒಲವು

ಬೆಂಗಳೂರು: ರಾಜ್ಯದಲ್ಲಿ ಮೀಸಲಾತಿಗಾಗಿ ವಿವಿಧ ಸಮುದಾಯಗಳು ಹೋರಾಟ, ಪ್ರತಿಭಟನೆಯ ಹಾದಿ ತುಳಿದಿರುವಂತೆಯೇ ರಾಜ್ಯ ಸರ್ಕಾರವು ಮೀಸಲಾತಿ ಪ್ರಮಾಣವನ್ನು ಶೇ.50ಕ್ಕಿಂತ ಹೆಚ್ಚಳ ಮಾಡುವಂತೆ ಸುಪ್ರೀಂ ಕೋರ್ಟ್‌ಗೆ ಅಫಿಡವಿಟ್ ಸಲ್ಲಿಸಿದೆ. ಈ ಮೂಲಕ ರಾಜಸ್ಥಾನ, ಜಾರ್ಖಂಡ್ ನಂತರ ಕರ್ನಾಟಕವೂ ಮೀಸಲು ಮಿತಿ ತೆಗೆಯಲು ಮನವಿ ಸಲ್ಲಿಸಿದಂತೆ ಆಗಿದೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ಸುದೀರ್ಘ ಚರ್ಚೆ ನಡೆಸಿ ನಿರ್ಧಾರ ಕೈಗೊಳ್ಳಲಾಗಿದೆ. ಈಗಿರುವ ಶೇ.50 ಮೀಸಲಾತಿ ಮಿತಿಯನ್ನು ಈಗಿನ ಅಗತ್ಯಕ್ಕೆ ತಕ್ಕಂತೆ ಹೆಚ್ಚಿಸಬೇಕು ಎಂಬ ಅಭಿಪ್ರಾಯವನ್ನು ಸರ್ಕಾರ ಸರ್ವೋಚ್ಚ ನ್ಯಾಯಾಲಯದ ಮುಂದಿರಿಸಿದೆ.

ರಾಜ್ಯದಲ್ಲಿ ಈಗಾಗಲೇ ಇಂದಿರಾ ಸಹಾನಿ ಪ್ರಕರಣದ ಆಧಾರದಲ್ಲಿ ಸುಪ್ರೀಂ ಕೋರ್ಟ್ ತೀರ್ಪಿನ ಪ್ರಕಾರ, ಶೇ.50ರಷ್ಟು ಮಿತಿಯಲ್ಲಿ ಮೀಸಲಾತಿ ನೀಡಲಾಗುತ್ತಿದೆ. ಆದರೆ, ದಲಿತರು, ಹಿಂದುಳಿದ ವರ್ಗಗಳ ಜನಸಂಖ್ಯೆಯಲ್ಲಿ ಹೆಚ್ಚಳವಾಗಿದ್ದರಿಂದ ಆ ಸಮುದಾಯಗಳಿಗೆ ಮೀಸಲಾತಿ ಪ್ರಮಾಣ ಹೆಚ್ಚಳ ಮಾಡುವ ಅಗತ್ಯವಿದೆ. ಅಲ್ಲದೇ ಅನೇಕ ಸಮುದಾಯಗಳು ಮೀಸಲಾತಿಗಾಗಿ ರಾಜ್ಯ ಸರ್ಕಾರದ ಮುಂದೆ ಪ್ರಸ್ತಾಪ ಇಟ್ಟಿರುವುದರಿಂದ ಮೀಸಲಾತಿ ಪ್ರಮಾಣ ಹೆಚ್ಚಳ ಮಾಡುವುದು ಅನುಕೂಲಕರ ಎನ್ನುವ ಅಭಿಪ್ರಾಯ ಸಂಪುಟ ಸಭೆಯಲ್ಲಿ ವ್ಯಕ್ತವಾಗಿದೆ ಎಂದು ತಿಳಿದು ಬಂದಿದೆ.

ಮೀಸಲಾತಿ ಹೆಚ್ಚಳ ಕುರಿತು ಕಳೆದ ವಾರ ಗೃಹ ಮತ್ತು ಕಾನೂನು ಸಚಿವ ಬಸವರಾಜ್ ಬೊಮ್ಮಾಯಿ ಅವರು ಕಾನೂನು ತಜ್ಞರು, ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರ ಜೊತೆ ಸಭೆ ನಡೆಸಿ ರಾಜ್ಯದ ನಿಲುವಿನ ಬಗ್ಗೆ ಚರ್ಚಿಸಿ ಅಭಿಪ್ರಾಯ ಸಂಗ್ರಹಿಸಿದ್ದರು. ಅದರ ಆಧಾರದಲ್ಲಿ ಅಡ್ವೊಕೇಟ್ ಜನರಲ್ ಪ್ರಭುಲಿಂಗ ನಾವಡಗಿ ಅವರು ಮೀಸಲಾತಿ ಪ್ರಮಾಣ ಹೆಚ್ಚಳ ಪ್ರಸ್ತಾಪ ಸಿದ್ಧಪಡಿಸಿ ರಾಜ್ಯ ಸರ್ಕಾರಕ್ಕೆ ನೀಡಿದ್ದು ಆ ವರದಿ ಆಧಾರದಲ್ಲಿ ಸಂಪುಟ ಸಭೆಯಲ್ಲಿ ಮೀಸಲಾತಿ ಪ್ರಮಾಣ ಹೆಚ್ಚಳ ಮಾಡುವ ಅನಿವಾರ್ಯತೆ ಇದೆ ಎಂದು ಸುಪ್ರೀಂ ಕೋರ್ಟ್‌ಗೆ ಅಫಿಡವಿಟ್ ಸಲ್ಲಿಸಿದ್ದಾರೆ.

**ಅಭಿಪ್ರಾಯ ಕೇಳಿದ್ದ ಸುಪ್ರೀಂ:** ಮಹಾರಾಷ್ಟ್ರ ಸರ್ಕಾರ ಮರಾಠ ಸಮುದಾಯಕ್ಕೆ ಹಿಂದುಳಿದಿರುವಿಕೆ ಆಧಾರದಲ್ಲಿ ಶೇ.16 ಮೀಸಲಾತಿ ನೀಡಲು ತೀರ್ಮಾನಿಸಿತ್ತು. ಆದರೆ, ಇದು 1992ರಲ್ಲಿ ಇಂದಿರಾ ಸಹಾನಿ ಪ್ರಕರಣದಲ್ಲಿ ಮೀಸಲಾತಿ ಮಿತಿ ಶೇ.50 ಮೀರದಂತೆ ಸುಪ್ರೀಂ ಕೋರ್ಟ್ ನೀಡಿದ್ದ ತೀರ್ಪಿನ ಉಲ್ಲಂಘನೆ. ಈ ಹಿನ್ನೆಲೆಯಲ್ಲಿ ಮೀಸಲು ಮಿತಿ ಹೆಚ್ಚಳ ಕುರಿತು ಎಲ್ಲ ರಾಜ್ಯಗಳಿಗೂ ಅಭಿಪ್ರಾಯ ತಿಳಿಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿತ್ತು.



### 2 ರಾಜ್ಯಗಳ ಮನವಿ

ಮೀಸಲಾತಿಯ ಶೇ.50ರ ಮಿತಿಯನ್ನು ತೆಗೆಯುವಂತೆ ಮನವಿ ಮಾಡಲು ಈಗಾಗಲೇ ರಾಜಸ್ಥಾನ ಮತ್ತು ಜಾರ್ಖಂಡ್ ರಾಜ್ಯಗಳು ನಿರ್ಧರಿಸಿವೆ. ರಾಜಸ್ಥಾನದಲ್ಲಿರುವ ಅಶೋಕ್ ಗೆಹ್ಲೋಟ್ ಸರ್ಕಾರ ಈ ಬಗ್ಗೆ ತೀರ್ಮಾನಿಸಿದೆ. ಅಂತೆಯೇ ಎರಡು ದಿನಗಳ ಹಿಂದಷ್ಟೇ ಅಲ್ಲಿನ ಮುಖ್ಯಮಂತ್ರಿ ಹೇಮಂತ್ ಸೋರೆನ್ ಅವರು, ಮೀಸಲಾತಿ ಶೇ.50ರ ಮಿತಿಯನ್ನು ತೆಗೆದುಹಾಕುವಂತೆ ಸುಪ್ರೀಂಕೋರ್ಟ್‌ಗೆ ಮನವಿ ಮಾಡುವುದಾಗಿ ವಿಧಾನಸಭೆಯಲ್ಲಿ ಹೇಳಿದ್ದರು.

### ಮಿತಿ ದಾಟಿದ ರಾಜ್ಯಗಳು

| | |
|---|---|
| 1. ತಮಿಳುನಾಡು | 69% |
| 2. ಮಹಾರಾಷ್ಟ್ರ | 75 % |
| 3. ತೆಲಂಗಾಣ | 62% |
| 4. ಹರ್ಯಾಣ | 67 % |

### ವಾದ ಮಂಡನೆ ಅಷ್ಟು ಸುಲಭವಲ್ಲ: ಹಾರನಹಳ್ಳಿ

ಒಂದೊಮ್ಮೆ ಆರ್ಥಿಕ ದುರ್ಬಲ ವರ್ಗದವರಿಗೆ ಶೇ.10ರಷ್ಟು ಮೀಸಲಾತಿ ನೀಡಿರುವುದಕ್ಕೆ ಶೇ.50ರ ಮೀಸಲಾತಿ ಪ್ರಮಾಣ ಹೆಚ್ಚಿಸಲಾಗುತ್ತಿದ್ದರೆ ಒಪ್ಪಬಹುದೇನೋ? ಆದರೆ, ಶೇ.50ರಷ್ಟು ಮೂಲ ಮೀಸಲಾತಿ ಪ್ರಮಾಣ ಹೆಚ್ಚಿಸಲಾಗುತ್ತಿದೆ ಎಂದಾದರೆ ಸುಪ್ರೀಂಕೋರ್ಟ್ ಅದನ್ನು ಯಾವ ರೀತಿ ಸ್ವೀಕರಿಸುತ್ತದೆ ನೋಡಬೇಕು. ಸಾಮಾನ್ಯ ಕೆಟಗರಿಯವರಿಗೆ ಅನ್ಯಾಯವಾಗುತ್ತದೆ ಎಂಬ ಕಾರಣಕ್ಕೆ ಮೀಸಲಾತಿ ಪ್ರಮಾಣ ಶೇ.50ಕ್ಕಿಂತ ಹೆಚ್ಚಿರಬಾರದು ಎಂದಿದೆ. ಹೀಗಿರುವಾಗ ಸುಪ್ರೀಂಕೋರ್ಟ್‌ನಲ್ಲಿ ವಾದ ಮಂಡನೆ ಅಷ್ಟೊಂದು ಸುಲಭವಲ್ಲ ಎನ್ನುತ್ತಾರೆ ಮಾಜಿ ಅಡ್ವೊಕೇಟ್ ಜನರಲ್ ಅಶೋಕ್ ಹಾರನಹಳ್ಳಿ.

ರಾಜ್ಯ ಸರ್ಕಾರದ ನಿಲುವು ಸ್ವಾಗತಾರ್ಹ. ಏಕೆಂದರೆ ಮೀಸಲಾತಿ ಶೇ.50ರಷ್ಟು ಇರಬೇಕು ಎಂಬ ಮಿತಿ, ಸಂವಿಧಾನದಲ್ಲಿ ಅಡಕವಾಗಿರುವ ನಿಯಮ ಅಲ್ಲ, ಬದಲಿಗೆ ನ್ಯಾಯಾಂಗ ತಾನೇ ಹಾಕಿಕೊಂಡ ಮಿತಿ. ಶೇ.50 ರ ಬದಲಿಗೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಸಿಗುವಂತಾಗಲಿ.

ಪ್ರೊ. ರವಿವರ್ಮ ಕುಮಾರ್,
ಮಾಜಿ ಅಡ್ವೊಕೇಟ್ ಜನರಲ್